ಜೈನ್ ಕಾಲೇಜ್, ಜಯನಗರ.

ದ್ವಿತೀಯ ಪಿ.ಯು.ಸಿ – ಮಾದರಿ ಪ್ರಶ್ನೆಪತ್ರಿಕೆ 02 – 2017

**ಸಮಯ : 3.15 ಗಂಟೆ** **ವಿಷಯ:– ಕನ್ನಡ** **ಅಂಕಗಳು–100**

**ಅ–ವಿಭಾಗ**

**I ಅ. ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ : 10x1=10**

1. ಉರಿಲಿಂಗಪೆದ್ದಿಯ ವಚನಗಳ ಅಂಕಿತ ಯಾವುದು?
2. ನಿಷ್ಪ್ರಯೋಜಕ ಮಗ ಯಾರು?
3. ಏನು ಬಂದೇ ತೀರುತ್ತದೆ ಎಂಬ ನಂಬಿಕೆಯಲ್ಲಿ ಜೀಸಸ್ ಶಿಲುಬೆ ಏರಿದ್ದಾನೆ?
4. ಹತ್ತಿಯ ಬೀಜಕ್ಕೆ ಯಾವುದು ತಪ್ಪದ ಕರ್ಮ?
5. ಡಾ॥ ತಿಮ್ಮಪ್ಪ ಬಸಲಿಂಗನಿಗೆ ಯಾವ ವೈದ್ಯರನ್ನು ಕಾಣಬೇಕೆಂದು ಸೂಚಿಸಿದರು?
6. 'ಕಿಡ್ನಿಸ್ಟೋನ್' ಬಗ್ಗೆ ತಿಳಿಯಲು ಲೇಖಕಿ ಯಾರನ್ನು ಭೇಟಿ ಮಾಡಿದರು?
7. ಕಲಾಂ ಅವರ ಆತ್ಮಚರಿತ್ರೆಯ ಹೆಸರೇನು?
8. ದುರ್ಗಪ್ಪನ ಪ್ರಕಾರ ತರ್ಲೆ ಡಿಪಾರ್ಟ್‌ಮೆಂಟ್ ಯಾವುದು?
9. ಆನೆಗೆ ಜಗದ್ಗುರುಗಳನ್ನು ಹೊರುವ ಕೆಲಸ ತಪ್ಪಿಹೋದುದೇಕೆ?
10. ಟೆಲಿಫೋನ್ ಕಂಬದ ಮೇಲೆ ಮೃತನಾದ ಲೈನ್‌ಮನ್ ಯಾರು?

**ಆ–ವಿಭಾಗ**

**II ಅ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ : 4x2=8**

11. ರಾವಣ ತನ್ನ ಅಂತಃಪುರದ ಸ್ತ್ರೀಯರನ್ನು ಹೇಗೆ ಸಂತೈಸಿದನು?
12. ಯಾರಿಗೆ ತತ್ವಜ್ಞಾನ ಹೇಳಿ ಪ್ರಯೋಜನವಿಲ್ಲ?
13. ತಂದೆ ಮಗುವಿಗೆ ಕಾಣಿಸಿಕೊಳ್ಳುವ ಬಗೆ ಹೇಗೆ?
14. ಮುದುಕಿಯು ಯಾರನ್ನು ಏನೆಂದು ಪ್ರಾರ್ಥಿಸುವಳು?
15. ಜನರನ್ನು ಕವಯಿತ್ರಿ ಯಾವ ಯಾವುದರಿಂದ ಪಾರು ಮಾಡುವುದಾಗಿ ಹೇಳಿದ್ದಾರೆ?

**ಆ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ : 3x2=6**

16. ಬ್ರಿಟಿಷರು ಬರುವ ಮೊದಲು ವಾಲ್‌ಪರೈ ಹೇಗಿತ್ತು?
17. ಕುಂಡದಲ್ಲಿ ನೆಟ್ಟ ಗಿಡಗಳ ಸ್ಥಿತಿ ಹೇಗಿರುತ್ತದೆ?
18. ನದಿಯ ಒಡಲು ಯಾವಾಗ ಪ್ರಕ್ಷುಬ್ಧವಾಗಿರುತ್ತದೆ?
19. ಹಳ್ಳಿಗರ ಆಕ್ಷೇಪದ ವಿಷಯ ಯಾವುದು?

**ಇ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ : 3x2=6**

20. ಕೃಷ್ಣೇಗೌಡರ ಆನೆ ಹುಟ್ಟಿ ಬೆಳೆದ ಬಗೆ ಹೇಗೆ?
21. ನಾಗರಾಜ ದುರ್ಗಪ್ಪನ ಮೇಲೆ ಏನೆಂದು ರೇಗಿದನು?
22. ಹುಚ್ಚು ನಾಯಿಗಳು ಆಸ್ಪತ್ರೆಯಲ್ಲಿ ಹೇಗೆ ವರ್ತಿಸುತ್ತವೆಂದು ಪುಟ್ಟಯ್ಯ ಹೇಳಿದನು?
23. ಅರಣ್ಯ ಇಲಾಖೆಯವರು ನಾಗರಾಜನನ್ನು ಕುರಿತು ಏನೆಂದು ಜಾಹೀರಾತು ನೀಡಿದರು?

**ಇ–ವಿಭಾಗ**

**III ಅ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ: 2x3=6**

24. ಏನಂ ಕೇಳ್ದಪೆನೋ....ಪೊಲ್ಲವಾರ್ತೆಯನಿನ್
25. ತುಂಬಿರುವ ತನಕ ತುಂತುಂಬಿ ಕುಡಿಯಬೇಕು.
26. ಇನ್ನೊಂದು ಸೇರ್ಪಡೆ ಆ ಲೀಲಾಮಾತ್ರನಿಗೆ.

**ಆ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ: 1x3=3**

27. ನಾವು ಪರದೇಶಿಗಳೆಂಬ ಭಾವನೆ ಬರುತ್ತದೆ.
28. ಕಬ್ಬಮಂ ಕಂಡಲ್ತೆ ಕಚ್ಚಳಿಯನಿತ್ತರ್.

**ಇ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ: 1x3=3**

29. ಜಗದ್ಗುರುಗಳು ಯಾವ ಧೈರ್ಯದ ಮೇಲೆ ಇವರ ಮೇಲೆ ಕುಳಿತುಕೊಳ್ಳುತ್ತಿದ್ದರೋ!
30. ಹೊರಗಡೆಯಿಂದ ಎಕ್ಸ್‌ಪೋರ್ಟ್ ಆದವು.

## ಈ–ವಿಭಾಗ

**IV ಅ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 3x4=12**

31. ದ್ರೌಪದಿ ಅವಮಾನಕ್ಕೊಳಗಾದ ಮೂರು ಪ್ರಸಂಗಗಳನ್ನು ವಿವರಿಸಿ.
32. ಜಾಲಿಯ ಮರವು ನಿರುಪಯುಕ್ತವೆಂಬುದನ್ನು ಪುರಂದರದಾಸರು ಹೇಗೆ ನಿರೂಪಿಸಿದ್ದಾರೆ?
33. ಬಾಳಿನ ಆಶಾಶ್ವತತೆ ಮತ್ತು ಪ್ರಕೃತಿಯ ನಿತ್ಯನೂತನತೆಯ ಗುಣವನ್ನು ಬೆಳಗು ಜಾವ ಕವನದಲ್ಲಿ ಕವಿ ಹೇಗೆ ವಿವರಿಸಿದ್ದಾರೆ?
34. ಹತ್ತಿಯ ಬೀಜದ ಮತ್ತು ಮಾನವ ಜೀವನದ ಪಯಣವನ್ನು ಕವಿ ಹೇಗೆ ಸಮೀಕರಿಸಿದ್ದಾರೆ?

**ಆ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 2x4=8**

35. ಬಸಲಿಂಗ ಡಾ॥ ತಿಮ್ಮಪ್ಪನವರ ಸೂಚನೆಗಳನ್ನು ಪಾಲಿಸದೆ ಇರಲು ಕಾರಣವೇನು?
36. ಬೆಳ್ಳಿಲೋಟ ಕಂಡಾಗ ಧಣಿಯಲ್ಲಿ ಆತಂಕ, ಗಾಬರಿ, ಭಯ ಉಂಟಾಗಲು ಕಾರಣವೇನು?
37. ಮುದ್ದಣ ಅರಮನೆಯಿಂದ ಬಂದ ಪರಿಯನ್ನೂ ಮನೋರಮೆಯ ಉಪಚಾರವನ್ನೂ ವಿವರಿಸಿ.

**ಇ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 2x4=8**

38. ಕೃಷ್ಣೇಗೌಡರ ಆನೆ ಹುಟ್ಟಿ ಬೆಳೆದ ಬಗೆಯನ್ನು ವಿವರಿಸಿ. ಅದು ಪೇಟೆಯಲ್ಲಿ ಏನು ಮಾಡುತ್ತಿತ್ತು?
39. ಡ್ರೈವರ್ ಸಾವಿನ ಸುದ್ದಿಯನ್ನು ಶಿವೇಗೌಡ ಮತ್ತಿತರರು ಹೇಗೆ ಮುಚ್ಚಿಹಾಕಿದರು?
40. ವೇಲಾಯುಧನ ಹೆಂಡತಿಗೆ ಆನೆಯ ಬಗ್ಗೆ ಸವತಿ ಮಾತ್ಸರ್ಯ ಮೂಡಲು ಕಾರಣಗಳೇನು?

## ಉ–ವಿಭಾಗ

**V ಅ. ಈ ಕೆಳಗಿನ ಪದ್ಯಕ್ಕೆ ಭಾವಾರ್ಥ ಬರೆಯಿರಿ: 1x5=5**

41. ಒಲೆಹತ್ತಿ ಉರಿದಡೆ ನಿಲಬಹುದಲ್ಲದೆ
ಧರೆಹತ್ತಿ ಉರಿದಡೆ ನಿಲಲುಬಾರದು
ಏರಿ ನೀರುಂಬಡೆ, ಬೇಲಿ ಕೆಯ್ಯ ಮೇವಡೆ
ನಾರಿ ತನ್ನ ಮನೆಯಲಿ ಕಳುವಡೆ
ತಾಯ ಮೊಲೆಹಾಲು ನಂಜಾಗಿ ಕೊಲುವಡೆ
ಇನ್ನಾರಿಗೆ ದೂರುವೆ ಕೂಡಲ ಸಂಗಮದೇವಾ

42. ಚಿಗುರೆಂದು ಮೆಲೆ ಬೇವು ಸ್ವಾದವಹುದೇ ಚೇಳ್ ಚಿಕ್ಕದೆಂದಳ್ಕರಿಂ
ತೆಗೆಯಲ್ ಕಚ್ಚದೆ ಪಾಲನೂಡಿ ಫಣಿಯಂ ಸಾಕಲ್ಕೆ ವಿಶ್ವಾಸಿಯೇ
ಖಗಮಂ ಸಾಕುವೆನೆಂದು ಗೂಗೆಮರಿಯಂ ಸಂಪ್ರೀತಿಯಿಂದೋವರೇ
ಪಗೆಯಂ ಬಾಲಕನೆಂಬರೆ ಹರಾಹರಾ ಶ್ರೀ ಚೆನ್ನಸೋಮೇಶ್ವರಾ

**ಆ. ಭಾಷಾಭ್ಯಾಸ: ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಸೂಚನೆಯಂತೆ ಉತ್ತರಿಸಿ : 6x2=12**

43. **ಈ ಪದಗಳ ಅರ್ಥ ಬರೆಯಿರಿ :** ತೃಣ, ಆಜ್ಯ.
44. **ಈ ಪದಗಳಿಗೆ ಸಮಾನಾರ್ಥಗಳನ್ನು ಬರೆಯಿರಿ:** ಮರ್ಕಟ, ಪುಷ್ಪ
45. **ಈ ಪದಗಳ ಗುಣವಾಚಕಗಳನ್ನು ತಿಳಿಸಿ:** ದುರ್ಜನ, ಎಡಗಣ್ಣು
46. **ಈ ಕ್ರಿಯಾಧಾತುಗಳ ನಿಶೇಧರೂಪವನ್ನು ಬರೆಯಿರಿ:** ತೊರೆ, ಕೇಳು
47. **ಈ ದ್ವಿರುಕ್ತಿಗಳನ್ನು ಸ್ವಂತವಾಕ್ಯದಲ್ಲಿ ಬಳಸಿರಿ:** ಹಂತಹಂತ, ಜೊತೆಜೊತೆಗೆ
48. **ಈ ಪದಗಳ ವಿಭಕ್ತಿಪ್ರತ್ಯಯವನ್ನು ಬರೆಯಿರಿ:** ಹರೆಯಕ್ಕೆ, ಗದ್ಯದೊಳ್
49. ಯಾವುದಾದರೂ ಎರಡು ನಾಮವಾಚಕಗಳನ್ನು ಬರೆಯಿರಿ:

**ಇ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಪ್ರಬಂಧ ಬರೆಯಿರಿ: 1x5=5**

50. ರಾಷ್ಟ್ರೀಯ ಸೇವಾ ಯೋಜನೆಯ ಮಹತ್ವ.
51. ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆ.

**ಈ. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಪತ್ರಲೇಖನ ಬರೆಯಿರಿ: 1x4=4**

52. ಒಂದು ವಾರಗಳ ರಜೆಯನ್ನು ಕೋರಿ ನಿಮ್ಮ ಪ್ರಾಂಶುಪಾಲರಿಗೊಂದು ಪತ್ರ ಬರೆಯಿರಿ.
53. ನಿಮ್ಮ ಊರಿಗೆ ಗ್ರಂಥಾಲಯ ಸೌಲಭ್ಯವನ್ನು ಕಲ್ಪಿಸುವಂತೆ ಕೋರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ಬರೆಯಿರಿ.

**ಉ. ಈ ಕೆಳಗಿನ ಗಾದೆಗಳನ್ನು ವಿಸ್ತರಿಸಿ. 1x4=4**

54. ಉಪ್ಪಿಗಿಂತ ರುಚಿಯಿಲ್ಲ, ತಾಯಿಗಿಂತ ಬಂಧುವಿಲ್ಲ.
55. ಮಾತು ಆಡಿದರೆ ಹೋಯ್ತು, ಮುತ್ತು ಒಡೆದರೆ ಹೋಯ್ತು.